**Bangalore**
**Regional News**
**15.04.2026: 14.30hrs**
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು:

1. ವಿಕಸಿತ ಭಾರತಕ್ಕೆ ೯ ಅಭಿವೃದ್ಧಿ ಕ್ಷೇತ್ರಗಳಲ್ಲಿ ತೊಡಗಿಸಿಕೊಳ್ಳಲು ನಾಡಿನ ಜನತೆಗೆ ಪ್ರಧಾನಿ ನರೇಂದ್ರ ಮೋದಿ ಕರೆ
2. ಕೇಂದ್ರದ ಬಾಕಿ ಅನುದಾನ ಬಿಡುಗಡೆ ಮಾಡುವಂತೆ ಪ್ರಧಾನಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮನವಿ
3. ಗ್ರಾಮೀಣ ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕೆ ಅಗತ್ಯ ಸೌಲಭ್ಯ ಒದಗಿಸಲು ಸರ್ಕಾರ ಬದ್ಧ - ಸಚಿವ ಪ್ರಿಯಾಂಕ್ ಖರ್ಗೆ
4. ವಿಧಾನಪರಿಷತ್ ಸದಸ್ಯ ಅಬ್ದುಲ್ ಜಬ್ಬಾರ್ ಕಾಂಗ್ರೆಸ್ ಪಕ್ಷದಿಂದ ಅಮಾನತು, ಆದೇಶ ಪ್ರಕಟ

**********

ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕಿನ ಆದಿಚುಂಚನಗಿರಿಯಲ್ಲಿ ಸುಮಾರು ೮೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ನೂತನ ಭೈರವೈಕ್ಯ ಮಂದಿರವನ್ನು ಪ್ರಧಾನಿ ನರೇಂದ್ರ ಮೋದಿ ಇಂದು ಲೋಕಾರ್ಪಣೆಗೊಳಿಸಿದರು. ಬಳಿಕ ಮಾತನಾಡಿದ ಪ್ರಧಾನಿ, ವಿಕಸಿತ ಭಾರತ ಕನಸು ನನಸಾಗಿಸಲು ೯ ಅಭಿವೃದ್ಧಿ ಕ್ಷೇತ್ರಗಳಲ್ಲಿ ಪ್ರಾಮಾಣಿಕವಾಗಿ ನಾಡಿನ ಜನತೆ ತೊಡಗಿಸಿಕೊಳ್ಳುವಂತೆ ಕರೆ ನೀಡಿದರು. ಜಲ ಸಂರಕ್ಷಣೆ ಮತ್ತು ನಿರ್ವಹಣೆ, ಏಕ್ ಪೇಡ್ ಮಾ ಕೆ ನಾಮ್ ಕಾರ್ಯಕ್ರಮದಡಿಯಲ್ಲಿ ಮರಗಳನ್ನು ನೆಡುವುದು ಮತ್ತು ಸುತ್ತಮುತ್ತಲಿನ ಪ್ರದೇಶಗಳು, ಧಾರ್ಮಿಕ ಸ್ಥಳಗಳು, ಹಳ್ಳಿಗಳು ಮತ್ತು ನಗರಗಳನ್ನು ಸ್ವಚ್ಛವಾಗಿಡಲು ನಾಗರಿಕರು ಕೈಜೋಡಿಸುವಂತೆ ಪ್ರಧಾನಿ ಹೇಳಿದರು. ದೇಸಿ ಸರಕುಗಳು ಮತ್ತು ಉದ್ಯಮಿಗಳನ್ನು ಪ್ರೋತ್ಸಾಹಿಸುವ ಮೂಲಕ ಸ್ವದೇಶಿ ಚಳುವಳಿಯನ್ನು ಪ್ರೋತ್ಸಾಹಿಸುವಂತೆ ಪ್ರಧಾನಿ ಕರೆ ನೀಡಿದರು. ದೇಶದ ಕೆಲವು ಭಾಗಗಳಿಗೆ ಭೇಟಿ ನೀಡುವ ಭಾರತೀಯರು ಪ್ರವಾಸೋದ್ಯಮವನ್ನು ಪ್ರೋತ್ಸಾಹಿಸಬೇಕು. ರಾಸಾಯನಿಕಗಳು ಮತ್ತು ಕೀಟನಾಶಕಗಳನ್ನು ತಪ್ಪಿಸುವ ಮೂಲಕ ಸಾವಯವ ಮತ್ತು ನೈಸರ್ಗಿಕ ಕೃಷಿಗೆ ಆದ್ಯತೆ ನೀಡಬೇಕು ಎಂದರು. ಸ್ಥೂಲಕಾಯ ತಪ್ಪಿಸಲು

ರಾಗಿ ಮತ್ತು ಕಡಿಮೆ ಖಾದ್ಯ ಎಣ್ಣೆ ಬಳಸಬೇಕು. ಯೋಗ, ಕ್ರೀಡೆ ಮತ್ತು ಫಿಟ್‌ನೆಸ್ ನಮ್ಮ ದೈನಂದಿನ ಜೀವನದ ಭಾಗವಾಗಿರಬೇಕು ಎಂದು ಕಿವಿಮಾತು ಹೇಳಿದರು.

****ಧ್ವನಿ****ಪಿಎಂ(೪೦ ಸೆಕೆಂಡ್ಸ್)

ಬಡವರು ಮತ್ತು ಹಿಂದುಳಿದ ವರ್ಗಗಳ ಬಗ್ಗೆ ಸೇವಾ ಭಾವನೆ ಹೊಂದಿರಬೇಕು. ಈ ಒಂಬತ್ತು ಧ್ಯೇಯಗಳನ್ನು ಅನುಸರಿಸಿದರೆ ನಮ್ಮ ದೇಶ ಶೀಘ್ರದಲ್ಲೇ ಅಭಿವೃದ್ಧಿ ಹೊಂದಿದ ದೇಶವಾಗಿ ಹೊರಹೊಮ್ಮಲಿದೆ ಎಂದು ಹೇಳಿದರು. ಇದಕ್ಕೂ ಮುನ್ನ ಮಠದ ಗೋರಕ್ಷಕನಾಥ ತಪಸ್ಸು ಮಾಡಿದ ಜ್ವಾಲಪೀಠಕ್ಕೆ ಭೇಟಿ ನೀಡಿದ ಪ್ರಧಾನಿ, ಕಾಲಭೈರವೇಶ್ವರನ ದರ್ಶನ ಪಡೆದು, ವಿಶೇಷ ಪೂಜೆ ಸಲ್ಲಿಸಿದರು. ಈ ವೇಳೆ ಸೌಂದರ್ಯ ಲಹರಿ ಮತ್ತು ಶಿವಸ್ತೋತ್ರ ಬಿಡುಗಡೆ ಮಾಡಿದರು. ಇದೇ ವೇಳೆ ಮಾತನಾಡಿದ ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ, ಶಿಕ್ಷಣ, ಆರೋಗ್ಯ ಮತ್ತು ಸಮಾಜ ಸೇವೆಯಲ್ಲಿ ಆದಿಚುಂಚನಗಿರಿ ಮಠ ಅನನ್ಯ ಪಾತ್ರ ವಹಿಸುತ್ತಿವೆ. ಡಾ. ಬಾಲಗಂಗಾಧರನಾಥ ಸ್ವಾಮೀಜಿ, ಅಸಂಖ್ಯಾತ ಬಡಮಕ್ಕಳ ಹೃದಯಗಳಲ್ಲಿ ಶಾಶ್ವತವಾಗಿ ನೆಲೆಸಿದ್ದಾರೆ ಎಂದರು. ನಗರಗಳಿಗೆ ಮಾತ್ರ ಸೀಮಿತವಾಗಿದ್ದ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಹಳ್ಳಿಗಳಿಗೂ ವಿಸ್ತರಿಸಿದ ಬಾಲಗಂಗಾಧರನಾಥ ಸ್ವಾಮೀಜಿ, ಸುಮಾರು ೫ ಕೋಟಿ ಸಸಿಗಳನ್ನು ಬೆಳೆಸುವ ಮೂಲಕ ಪರಿಸರ ಕ್ಷೇತ್ರದಲ್ಲಿಯೂ ಗಮನಾರ್ಹ ಕೊಡುಗೆ ನೀಡಿದ್ದಾರೆ ಎಂದರು. ಈ ಸಂದರ್ಭದಲ್ಲಿ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ನಿರ್ಮಲಾನಂದನಾಥ ಸ್ವಾಮೀಜಿ, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ. ಕೃಷಿ ಸಚಿವ ಚಲುವರಾಯಸ್ವಾಮಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

**********

ರಾಜ್ಯಕ್ಕೆ ಆಗಮಿಸಿರುವ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ವಾಗತ ಕೋರಿದ್ದು, ಬೆಂಗಳೂರು ಉಪನಗರ ರೈಲು ಯೋಜನೆಗೆ ಅನುದಾನ ಬಿಡುಗಡೆ ಮಾಡಬೇಕು ಮತ್ತು ಬೆಂಗಳೂರು-ಮುಂಬೈ ಹೈಸ್ಪೀಡ್ ರೈಲ್ವೆ ಕಾರಿಡಾರ್ ಯೋಜನೆಗೆ ಚಾಲನೆ ನೀಡಬೇಕು ಎಂದು ಪತ್ರದ ಮೂಲಕ ಒತ್ತಾಯಿಸಿದ್ದಾರೆ. ಪ್ರಾದೇಶಿಕ ಅಭಿವೃದ್ಧಿ ಮತ್ತು ಸಂಪರ್ಕ ಹೆಚ್ಚಳಕ್ಕೆ ಮೈಸೂರಿಗೆ ಹೈಸ್ಪೀಡ್ ರೈಲು ಕಾರಿಡಾರ್ ವಿಸ್ತರಿಸಬೇಕು. ರೈಲ್ವೆ ಬಜೆಟ್‌ನಲ್ಲಿ ಘೋಷಿಸಲಾದ ಕೋಲಾರದಲ್ಲಿನ ರೈಲ್ವೆ ಕೋಚ್ ಫ್ಯಾಕ್ಟರಿಗೆ ರಾಜ್ಯ ಸರ್ಕಾರ ಒಂದು ಸಾವಿರದ ೧೨೩ ಎಕರೆ ಭೂಮಿಯನ್ನು ನೀಡಲು ಸಿದ್ಧವಿದ್ದು, ಈ ಯೋಜನೆಯ ಅನುಷ್ಠಾನಕ್ಕೆ ಕೇಂದ್ರ ಸರ್ಕಾರ

ಮಧ್ಯ ಪ್ರವೇಶಿಸಬೇಕು ಎಂದು ಮನವಿ ಮಾಡಿದ್ದಾರೆ. ಜಲಜೀವನ್ ಮಿಷನ್ ಯೋಜನೆ ಅನುಷ್ಠಾನಕ್ಕಾಗಿ ಕೇಂದ್ರ ಸರ್ಕಾರ ಬಾಕಿ ಇರುವ ೧೭ ಸಾವಿರದ ೫೫೪ ಕೋಟಿ ಅನುದಾನ ಬಿಡುಗಡೆ ಮಾಡಬೇಕು. ಬೆಂಗಳೂರು, ರಾಷ್ಟ್ರೀಯ ಆರ್ಥಿಕತೆಗೆ ಗಮನಾರ್ಹ ಕೊಡುಗೆ ನೀಡುತ್ತಿದ್ದು, ಅದರ ಅಭಿವೃದ್ಧಿಗೆ ೨ ಸಾವಿರ ಕೋಟಿ ರೂಪಾಯಿ ವಿಶೇಷ ಅನುದಾನ ಒದಗಿಸಬೇಕು ಎಂದು ಮುಖ್ಯಮಂತ್ರಿ ಪ್ರಧಾನಿ ಅವರನ್ನು ಒತ್ತಾಯಿಸಿದ್ದಾರೆ.

**********

ಗ್ರಾಮೀಣ ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕೆ ಅಗತ್ಯವಿರುವ ಎಲ್ಲ ರೀತಿಯ ಸೌಲಭ್ಯವನ್ನು ಒದಗಿಸುವುದಕ್ಕೆ ಸರ್ಕಾರ ಬದ್ಧವಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಕಲಬುರಗಿ ನಗರದಲ್ಲಿ ೧೧ ಕೋಟಿ ೮೨ ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಮೆಟ್ರಿಕ್ ನಂತರದ ಡಾ. ಬಿ.ಆರ್. ಅಂಬೇಡ್ಕರ್ ಬಾಲಕ ಹಾಗೂ ಬಾಲಕಿಯರ ವಸತಿ ನಿಲಯ ಲೋಕಾರ್ಪಣೆ ಮಾಡಿ, ಮಾತನಾಡಿದ ಸಚಿವರು, ತಲಾ ನೂರು ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ವಸತಿ ಸೌಲಭ್ಯ ಕಲ್ಪಿಸುವ ಈ ವಸತಿ ನಿಲಯವು ಲೋಕೋಪಯೋಗಿ ಇಲಾಖೆಯಿಂದ ನಿರ್ಮಾಣ ಮಾಡಲಾಗಿದೆ ಎಂದು ಹೇಳಿದರು. ಸುಮಾರು ಒಂದು ಎಕರೆ ಪ್ರದೇಶದಲ್ಲಿ ನಿರ್ಮಿಸಲಾಗಿರುವ ಬಾಲಕರ ವಸತಿ ನಿಲಯಕ್ಕೆ ೫ ಕೋಟಿ ೩೨ ಲಕ್ಷ ರೂಪಾಯಿ ಹಾಗೂ ಬಾಲಕಿಯರ ವಸತಿ ನಿಲಯಕ್ಕೆ ೨ ಕೋಟಿ ೫೦ ಲಕ್ಷ ವೆಚ್ಚ ಮಾಡಲಾಗಿದೆ ಎಂದು ತಿಳಿಸಿದರು.

**********

ವಿಧಾನಪರಿಷತ್ ಸದಸ್ಯ ಅಬ್ದುಲ್ ಜಬ್ಬರ್ ಅವರನ್ನು ಕೂಡಲೇ ಜಾರಿಗೆ ಬರುವಂತೆ ಕಾಂಗ್ರೆಸ್ ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ಅಮಾನತುಗೊಳಿಸಲಾಗಿದೆ. ಇತ್ತೀಚೆಗೆ ನಡೆದ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಪಕ್ಷ ವಿರೋಧಿ ಚಟುವಟಿಕೆ ಆರೋಪ ಹಿನ್ನೆಲೆಯಲ್ಲಿ ಅವರನ್ನು ಪಕ್ಷದಿಂದ ಅಮಾನತು ಮಾಡಲಾಗಿದೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹೇಳಿಕೆಯಲ್ಲಿ ತಿಳಿಸಿದ್ದಾರೆ.

**********

ಶಿಕ್ಷಣ ವ್ಯವಸ್ಥೆಯಲ್ಲಿ ವೈಚಾರಿಕತೆ, ವೈಜ್ಞಾನಿಕತೆ ಮತ್ತು ಮಾನವೀಯತೆಯನ್ನು ಅಳವಡಿಸಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ವಿಧಾನಸೌಧದ ಬ್ಯಾಂಕ್ವೆಟ್‌ಹಾಲ್‌ನಲ್ಲಿಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರ ಆಯೋಜಿಸಿದ್ದ ಕನ್ನಡ ಸಾಮರಸ್ಯ ನೆಲೆಗಳು: ಕೃತಿಗಳನ್ನು ಲೋಕಾರ್ಪಣೆಗೊಳಿಸಿ, ಮಾತನಾಡಿದ ಮುಖ್ಯಮಂತ್ರಿ ಸಮಾಜಮುಖಿ ಶಿಕ್ಷಣ ವ್ಯವಸ್ಥೆ ಜಾರಿಯಾಗಬೇಕು ಎಂದರು. ಯುವಜನತೆಯಲ್ಲಿ ಮಾನವೀಯತೆ ನೆಲೆಸಬೇಕು, ಈ ನಿಟ್ಟಿನಲ್ಲಿ ಯುವಜನತೆಯಲ್ಲಿ ಅರಿವು ಮೂಡಿಸಬೇಕು ಎಂದು ತಿಳಿಸಿದರು.

**********

ಮಹಿಳಾ ಮೀಸಲಾತಿಯು ಕರ್ನಾಟಕ, ಭಾರತ ಮಾತ್ರವಲ್ಲ ವಿಶ್ವದ ಎಲ್ಲ ಮಹಿಳೆಯರಿಗೂ ಸಂಭ್ರಮದ ಕ್ಷಣ ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷೆ ಮಾಳವಿಕಾ ಅವಿನಾಶ್ ಹೇಳಿದ್ದಾರೆ. ಮೈಸೂರಿನ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ೨೦೪೭ರ ವಿಕಸಿತ ಭಾರತ ಸಾಕಾರಕ್ಕೆ ಮಹಿಳಾ ನೇತೃತ್ವದ ಅಭಿವೃದ್ಧಿಯ ಚಿಂತನೆ ಇದರ ಹಿಂದಿದೆ ಎಂದರು.

**********

ಮಹಿಳೆಯರ ಜೀವನಮಟ್ಟ ಸುಧಾರಣೆಗೆ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ವಿವಿಧ ಯೋಜನೆಗಳು ಪರಿಣಾಮಕಾರಿಯಾಗಿವೆ ಎಂದು ಬಾಗಲಕೋಟೆಯ ನಗರಸಭೆ ಉಪಾಧ್ಯಕ್ಷೆ ಶೋಭಾ ರಾವ್ ತಿಳಿಸಿದ್ದಾರೆ. ನಾರಿ ಶಕ್ತಿ ವಂದನಾ ಕುರಿತು ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಪ್ರಧಾನಮಂತ್ರಿ ಉಜ್ವಲ ಯೋಜನೆಯಿಂದ ಬಡ ಕುಟುಂಬಗಳ ಮಹಿಳೆಯರಿಗೆ ಅನುಕೂಲವಾಗಿದೆ. ಇದರಿಂದ ಆರೋಗ್ಯದ ಮೇಲಿನ ಹಾನಿ ಕಡಿಮೆಯಾಗಿ ಜೀವನ ಶೈಲಿಯಲ್ಲಿ ಬದಲಾವಣೆಯಾಗಿದೆ ಎಂದು ಹೇಳಿದ್ದಾರೆ.

(ಧ್ವನಿ- ಶೋಭಾರಾವ್) ೩೨ ಸೆಕೆಂಡ್

**********

ದಾವಣಗೆರೆ ದೃಶ್ಯ ಕಲಾ ಮಹಾವಿದ್ಯಾಲಯದಲ್ಲಿಂದು ಆಯೋಜಿಸಿದ್ದ ವಿಶ್ವ ಕಲಾ ದಿನಾಚರಣೆ ಕಾರ್ಯಕ್ರಮಕ್ಕೆ ದಾವಣಗೆರೆ ವಿಶ್ವ ವಿದ್ಯಾಲಯದ ಕುಲಪತಿ ಪ್ರೊ.ಬಿ.ಡಿ.ಕುಂಬಾರ ಚಾಲನೆ ನೀಡಿದರು. ಬಳಿಕ ಅವರು, ಕಲಾಕೃತಿಗಳು ಕೇವಲ ಪ್ರದರ್ಶನದ ವಸ್ತುವಾಗಬಾರದು, ಅವುಗಳ ಹಿಂದೆ ಅಡಗಿರುವ ಆಶಯ ಸಾಮಾನ್ಯ ಜನರಿಗೂ ಅರ್ಥವಾಗುವಂತಿರಬೇಕು ಎಂದು ಹೇಳಿದರು. ಯುನೆಸ್ಕೋ ಮಾರ್ಗಸೂಚಿಯಂತೆ ಏಪ್ರಿಲ್ ೧೫ ರಂದು ಪ್ರತಿವರ್ಷ ವರ್ಲ್ಡ್ ಆರ್ಟ್ ಡೇ

ಆಚರಿಸಲಾಗುತ್ತಿದ್ದು, ಪ್ರದರ್ಶನದಲ್ಲಿರುವ ಪ್ರತಿಯೊಂದು ಕಲಾಕೃತಿಯೂ ಒಂದು ವಿಶಿಷ್ಟ ವಿಷಯವನ್ನು ಹೊಂದಿರುತ್ತವೆ ಎಂದರು.

**********

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಲಖ್ನೋ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಕ್ರೀಡಾಂಗಣದ ಸುತ್ತಮುತ್ತ ಬಿಗಿ ಭದ್ರತೆ ಏರ್ಪಡಿಸಲಾಗಿದೆ.

*****END*****